# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 149 (10) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11-08-2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

*******

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು:<br>( ಮಾಹಿತಿ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಶುಶ್ರೂಷಕಾಧಿಕಾರಿಗಳಿಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ವೇತನ ಆಯೋಗದ ಆದೇಶದಂತೆ ವೇತನ ಪಾವತಿಸಲಾಗುತ್ತಿದೆ.<br>ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಪ್ರಾಯೋಜಿತ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರದಿಂದ ಅನುಮೋದಿತ ROP ಯಂತೆ ಮಾಹೆವಾರು ವೇತನ ನೀಡಲಾಗುತ್ತಿದೆ.<br>Supplementary PIP, F No M-11016/7/2024-NHM-II, Dated: 06.05.2025 ರಲ್ಲಿನ ಅನುಮೋದನೆಯಂತೆ Nursing Officer working at SNCU/ICU (with computer skills and a minimum of 3 years of experience) ಗಳಿಗೆ ಮಾಹೆವಾರು ರೂ.22,000/- ವೇತನವನ್ನು ನಿಗಧಿಪಡಿಸಲಾಗಿರುವ ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ |
| (ಆ) | ಕಲಬುರಗಿಯ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಇರುವ ಡಯಾಲಿಸೀಸ್ ಕೇಂದ್ರದಲ್ಲಿ ತಜ್ಞ ವೈದ್ಯರು ಮತ್ತು ಅಗತ್ಯ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ. ಈ ಕುರಿತು ಕೈಗೊಂಡ ಕ್ರಮವೇನು: | ಡಯಾಲಿಸಿಸ್ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸಬೇಕಾದ ತಜ್ಞ ವೈದ್ಯರ ಸಂಖ್ಯೆ:02, ಸಿಬ್ಬಂದಿಗಳ ಸಂಖ್ಯೆ:12.<br>ಜಿಮ್ಸ್ ಸಂಸ್ಥೆಯ ಡಯಾಲಿಸಿಸ್ ಕೇಂದ್ರಕ್ಕೆ ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಕಾರವಾರದಿಂದ ಒಬ್ಬ ಪ್ರಾಧ್ಯಾಪಕರನ್ನು 01 ವರ್ಷದವರೆಗೆ ನಿಯೋಜಿಸಲಾಗಿರುತ್ತದೆ ಹಾಗೂ ಜಿಲ್ಲಾ ಆಸ್ಪತ್ರೆ ಕಲಬುರಗಿಯಲ್ಲಿ ಒಬ್ಬ Pediatric Nephrology ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ.<br>ಪ್ರಸ್ತುತ 08 ಡಯಾಲಿಸಿಸ್ ತಂತ್ರಜ್ಞರು ಕಾರ್ಯ ನಿರ್ವಹಿಸುತ್ತಿರುತ್ತಾರೆ. |
| (ಇ) | ಸದರಿ ಡಯಾಲಿಸಿಸ್ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸಬೇಕಾದ ತಜ್ಞ ವೈದ್ಯರು ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು (ಸಂಪೂರ್ಣ ಮಾಹಿತಿ ನೀಡುವುದು) | |
| (ಈ) | ಸದರಿ ಡಯಾಲಿಸಿಸ್ ಕೇಂದ್ರದಲ್ಲಿ ಒಂದು ಬಾರಿಗೆ ಎಷ್ಟು ರೋಗಿಗಳಿಗೆ ಡಯಾಲಿಸಿಸ್ ಸೌಲಭ್ಯ ಒದಗಿಸಲಾಗುವುದು: ಸದರಿ ಕೇಂದ್ರಗಳಿಗೆ ಅಗತ್ಯವಿರುವಷ್ಟು ಯಂತ್ರೋಪಕರಣಗಳು ಹಾಗೂ ಔಷಧಿ ದಾಸ್ತಾನು ಇದೆಯೇ? | ಒಂದು ಬಾರಿಗೆ 17 ರೋಗಿಗಳಿಗೆ ಡಯಾಲಿಸಿಸ್ ಸೌಲಭ್ಯ ಒದಗಿಸಲಾಗುತ್ತದೆ. ಸದರಿ ಕೇಂದ್ರಕ್ಕೆ ಅಗತ್ಯವಿರುವ ಯಂತ್ರೋಪಕರಣಗಳು ಹಾಗೂ ಔಷಧಿ ದಾಸ್ತಾನು ಇರುತ್ತದೆ. |

ಸಂಖ್ಯೆ: ಆಕುಕ 71 ಎಮ್‌ಎಸ್‌ಎನ್ 2025

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಈ. ಸುತ್ತೋಲೆ ಪತ್ರ. ಸಂ: 10 ಕ್ಕೆ ಅನುಬಂಧ

ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯಮತ್ತುಕುಟುಂಬ ಕಲ್ಯಾಣ ಸಂಘ, ಬೆಂಗಳೂರು
1ನೇ ಮಹಡಿ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-23

ಸಂಖ್ಯೆ: HFW/734/HSH/2024 (E-1454716) ದಿನಾಂಕ: 29.05.2025

## ಸುತ್ತೋಲೆ

**ವಿಷಯ:** ಎನ್‌ಹೆಚ್‌ಎಂ ಕಾರ್ಯಕ್ರಮದಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ MBBS ವೈದ್ಯಾಧಿಕಾರಿಗಳು, SNCU / ICU ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಮತ್ತು ಪ್ರಮುಖ ಕ್ಲಿನಿಕಲ್ ತಜ್ಞರುಗಳ ವೇತನ ಪರಿಷ್ಕರಣೆಯ ಕುರಿತು.

**ಉಲ್ಲೇಖ:** Approval of Supplementary Programme Implementation Plan for Karnataka for the financial year 2024-26, F.No.M-11016/7/2024- NHM-II, Dated: 06th May, 2025.

*****

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ರಾಜ್ಯ / ಜಿಲ್ಲೆಗಳಲ್ಲಿ ವಿವಿಧ ಕಾರ್ಯಕ್ರಮದಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ MBBS ವೈದ್ಯಾಧಿಕಾರಿಗಳು, SNCU / ICU ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಮತ್ತು ಪ್ರಮುಖ ಕ್ಲಿನಿಕಲ್ ತಜ್ಞರ (OBG, Paediatric, Anaesthesia, General Medicine, Ortho, Surgeon, Ophthalmologist) ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಉಲ್ಲೇಖದನ್ವಯ 2024-26 ನೇ ಸಾಲಿನ ಪೂರಕ ಆರ್‌ಓಪಿಯಲ್ಲಿ ಅನುಮೋದನೆಗೊಂಡಿರುತ್ತದೆ. ವಿವರ ಈ ಕೆಳಕಂಡಂತಿದೆ:

| Sl. No | Designation | Old Salary | Revised Salary |
|---|---|---|---|
| 1. | MBBS Medical Officers | Rs.46895 – 50000 | Rs. 75,000 |
| 2. | Major Clinical Specialist (OBG, Paediatric, Anaesthesia, General Medicine, Ortho, Surgeon, Ophthalmologist) | Rs.1,10,000 – 1,30,000 | Rs.1,40,000 * |
| 3. | Nursing Officer working at SNCU / ICU (with computer skills and a minimum of 3 years of experience) | Rs.14,186 – Rs.18,714 | Rs. 22,000 |

**ಮೇಜರ್ ಕ್ಲಿನಿಕಲ್ ಸ್ಪೆಷಲಿಸ್ಟ್ ಹುದ್ದೆಯ ನೇಮಕಾತಿಗೆ ಮಾನದಂಡಗಳು:**

1. ಮೇಜರ್ ಕ್ಲಿನಿಕಲ್ ಸ್ಪೆಷಲಿಸ್ಟ್‌ಗಳ ಆರಂಭಿಕ ಮಾಸಿಕ ವೇತನ ರೂ. 1,40,000.00
2. ಅನುಭವಿ ಅಭ್ಯರ್ಥಿಗಳ ಮಾಸಿಕ ವೇತನವನ್ನು ಅವರ ಅನುಭವದ ಆಧಾರದ ಮೇಲೆ ಪ್ರತಿ ವರ್ಷಕ್ಕೆ 2.5% ರಷ್ಟು ಹೆಚ್ಚುವರಿಯಾಗಿ ನಿಗದಿಪಡಿಸುವುದು(1,400,000+2.5%).
3. ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ಶಿಫಾರಸ್ಸುಗೊಂಡ ಅನುಭವಿ ಅಭ್ಯರ್ಥಿಗಳ ಪಟ್ಟಿಯನ್ನು ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ರವರಿಗೆ ರವಾನಿಸಿ, ಅವರ ಅನುಮೋದನೆ ಪಡೆದ ನಂತರ ಅಂತಿಮಗೊಳಿಸುವುದು.
4. ಮೇಜರ್ ಕ್ಲಿನಿಕಲ್ ಸ್ಪೆಷಲಿಸ್ಟ್‌ಗಳ ವೇತನವನ್ನು ರೂ. 2,00,000.00 ಗಳಿಗೆ ಮಿತಿಗೊಳಿಸುವುದು.

Scanned with OKEN Scanner